| ವಿಧಾನ ಪರಿಷತ್ತು | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 807 |
| ಸದಸ್ಯರ ಹೆಸರು | ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನ ಸಭಾ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 24.08.2026 |
| ಉತ್ತರಿಸುವವರು | ಮಾನ್ಯ ಅರಣ್ಯ ಜೀವಿ ಪರಿಸ್ಥಿತಿ ಮತ್ತು ಪರಿಸರ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಅರಣ್ಯ ಇಲಾಖೆಯಲ್ಲಿ ಅದರಲ್ಲೂ ಹಳ್ಳಿಗಳಲ್ಲಿ ಅರಣ್ಯ ಜಮೀನು ಆಕ್ರಮಿಸಿ ಮನೆ ಕಟ್ಟಿಕೊಳ್ಳುತ್ತಿರುವ ಪ್ರಕ್ರಿಯೆ ನಿರಂತರವಾಗಿ ನಡೆಯುತ್ತಿರುವುದನ್ನು ಸರ್ಕಾರ ಪತ್ತೆ ಹಚ್ಚಿದೆಯೇ; ಇದನ್ನು ತಡೆಗಟ್ಟಲು ಕಟ್ಟುತ್ತಿರುವ ಕಟ್ಟಡಗಳ ಕಾರ್ಯ ನಿಲ್ಲಿಸಲು ಅರಣ್ಯ ಇಲಾಖೆ ಮುಂದಾಗದಿರಲು ಕಾರಣಗಳೇನು; | ರಾಜ್ಯದಲ್ಲಿ ಅರಣ್ಯ ಭೂಮಿ ಒತ್ತುವರಿ ಪ್ರಕರಣಗಳು ಕಂಡುಬಂದ ಕೂಡಲೇ ಒತ್ತುವರಿ ತೆರವಿಗೆ ಕರ್ನಾಟಕ ಅರಣ್ಯ ಕಾಯ್ದೆ 1963 ಕಲಂ-64(ಎ)ರ ಅಡಿಯಲ್ಲಿ ವಿಚಾರಣೆ ನಡೆಸಿ ಒತ್ತುವರಿ ತೆರವುಗೊಳಿಸಲು ಕ್ರಮ ಜರುಗಿಸಲಾತ್ತಿದೆ. |
| ಆ) | ಅನೇಕ ಕಡೆ ಪ್ರಕರಣಗಳನ್ನು ಆಯಾ ತಾಲ್ಲೂಕಿನ ಅರಣ್ಯ ಅಧಿಕಾರಿಗಳ ಗಮನಕ್ಕೆ ತಂದಾಗ, ಅವರ ಮೇಲೆ ಎಫ್ ಐ ಆರ್ ಹಾಕಲಾಗಿದೆ ಎಂದು ಹೇಳಿ ಅವರು ಕಟ್ಟಡ ನಿರ್ಮಾಣ ಮುಂದುವರಿಸಲು ಅವಕಾಶ ನೀಡುತ್ತಿರುವುದು ಸರ್ಕಾರ ಗಂಭೀರವಾಗಿ ಪರಿಗಣಿಸಿದೆಯೇ; ಅರಣ್ಯ ಭೂಮಿ ಉಳಿಸಲು ಸರ್ಕಾರ ಕ್ರಮ ಜರುಗಿಸುವುದೆ; | ಅರಣ್ಯ ಒತ್ತುವರಿಯನ್ನು ಗಂಭೀರವಾಗಿ ಪರಿಗಣಿಸಿ ಅರಣ್ಯ ಒತ್ತುವರಿ ತೆರವಿಗೆ ಕರ್ನಾಟಕ ಅರಣ್ಯ ಕಾಯ್ದೆ 1963 ಕಲಂ-64(ಎ)ರ ಅಡಿಯಲ್ಲಿ ವಿಚಾರಣೆ ನಡೆಸಿ ಒತ್ತುವರಿ ತೆರವುಗೊಳಿಸಲು ಕ್ರಮ ಜರುಗಿಸಲಾಗುತ್ತಿದೆ ಹಾಗೂ ಅರಣ್ಯ ಭೂಮಿಯನ್ನು ಇಲಾಖಾ ವಶಕ್ಕೆ ಪಡೆಯಲಾಗುತ್ತಿದೆ. |
| ಇ) | ಪ್ರತಿ ತಾಲ್ಲೂಕಿನಲ್ಲಿ ಅರಣ್ಯ ಭೂಮಿ ರಕ್ಷಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ವಿವರ ಒದಗಿಸುವುದು) | ಅರಣ್ಯ ಭೂಮಿಯನ್ನು ಒತ್ತುವರಿಯಾಗದಂತೆ ಅವಶ್ಯಕತೆಗೆ ಅನುಗುಣವಾಗಿ ಜಾನುವಾರು ನಿರೋಧಕ ಕಂದಕ, ಮುಳ್ಳುತಂತಿ ಬೇಲಿ ಹಾಗೂ ಚೈನ್‌ಲಿಂಕ್ ಮೆಷ್ ಬೇಲಿಯನ್ನು ನಿರ್ಮಾಣ ಮಾಡುವುದರ ಮುಖಾಂತರ ಅರಣ್ಯ ಗಡಿಗಳನ್ನು ಭದ್ರಪಡಿಸಲಾಗುತ್ತಿದೆ. ಅಲ್ಲದೇ ಅರಣ್ಯ ಗಡಿಗಳಲ್ಲಿ ಗಸ್ತು ತಿರುಗುವ ಮೂಲಕ ಗಡಿ ಭದ್ರತೆ ಹಾಗೂ ಒತ್ತುವರಿ ತಡೆಗಟ್ಟಲು ಎಲ್ಲಾ ರೀತಿಯ ಸೂಕ್ತ ಕ್ರಮ ಕೈಗೊಳ್ಳಲಾಗುತ್ತಿದೆ. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಈ) | ಈಗಾಗಲೇ ಅರಣ್ಯ ಭೂಮಿಯಲ್ಲಿ ಅಕ್ರಮವಾಗಿ ಕಟ್ಟಡ ಮನೆ ಕಟ್ಟುತ್ತಿರುವ ಹಾಗೂ ಮನೆ ನಿರ್ಮಿಸಿಕೊಂಡಿರುವವರ ಮನೆ ಸಕ್ರಮ ಮಾಡಲಾಗುವುದೆ: ಅರಣ್ಯ ಭೂಮಿ ಉಳಿಸಲು ಅವರುಗಳ ವಿರುದ್ಧ ನಿಯಮನುಸಾರ ಯಾವ ರೀತಿಯಾಗಿ ಕ್ರಮ ಜರುಗಿಸಲಾಗುವುದು? | ಅರಣ್ಯ ಭೂಮಿಯಲ್ಲಿ ಅನಧಿಕೃತವಾಗಿ ಮನೆ/ಕಟ್ಟಡ ನಿರ್ಮಿಸುವ ಹಾಗೂ ಈಗಾಗಲೇ ನಿರ್ಮಿಸಿಕೊಂಡಿರುವ ಕಾರ್ಯಗಳನ್ನು ಅರಣ್ಯ ಅತಿಕ್ರಮಣ/ಒತ್ತುವರಿ ಪ್ರಕರಣಗಳೆಂದೇ ಪರಿಗಣಿಸಲಾಗುತ್ತದೆ. ಇಂತಹ ಅನಧಿಕೃತ ಒತ್ತುವರಿಗಳನ್ನು ಸಕ್ರಮಗೊಳಿಸಲು ನಿಯಮಾನುಸಾರ ಅವಕಾಶವಿರುವುದಿಲ್ಲ.<br><br>ಅರಣ್ಯ ಭೂಮಿಯ ಒತ್ತುವರಿಗಳ ವಿರುದ್ಧ 'ಕರ್ನಾಟಕ ಅರಣ್ಯ ಕಾಯ್ದೆ, 1963'ರ ಕಲಂ 64(ಎ) ಅಡಿಯಲ್ಲಿ ನಿಯಮಾನುಸಾರ ವಿಚಾರಣೆ ಕೈಗೊಂಡು ಒತ್ತುವರಿ ತೆರವುಗೊಳಿಸಲು ಸೂಕ್ತ ಕಾನೂನು ಕ್ರಮ ಜರುಗಿಸಲಾಗುತ್ತಿದೆ. |

**ಸಂಖ್ಯೆ: FEE/138/FGL/2026**

(ರಾಮಲಿಂಗಾರೆಡ್ಡಿ)
ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು